ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಪಡಿತರ ವಿತರಣೆ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

667 (803) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಲಾಕ್‌ಡೌನ್ ಸಮಯದಲ್ಲಿ ಬಡವರಿಗೆ ಸರ್ಕಾರದ ವತಿಯಿಂದ ಒದಗಿಸಲಾದ ಪಡಿತರವು ಸೂಕ್ತ ಫಲಾನುಭವಿಗಳಿಗೆ ಸೂಕ್ತ ಸಮಯಕ್ಕೆ ಸಿಗದೆ ದಲ್ಲಾಳಿಗಳ ಪಾಲಾಗಿ ಬಡವರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸರ್ಕಾರ ಪಡಿತರ ವ್ಯವಸ್ಥೆಯ ಪಾರದರ್ಶಕತೆ ಕಾಪಾಡಲು ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ಅತ್ಯಂತ ಕಡು ಬಡವರಿಗೆ ಅಂತ್ಯೋದಯ ಯೋಜನೆಯಡಿ ನೀಡುವ ಪಡಿತರವು ಅವರಿಗೆ ಸಾಲದೆ ಅವರ ದೈನಂದಿನ ಜೀವನ ನಿರ್ವಹಣೆಗೆ ಕಷ್ಟಸಾಧ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸದರಿಯವರಿಗೆ ಹೆಚ್ಚಿನ ಸೌಲಭ್ಯ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಈ) ಪಡಿತರ ವ್ಯವಸ್ಥೆಯಲ್ಲಿ ಅಂತ್ಯೋದಯ, ಬಿಪಿಎಲ್, ಎಪಿಎಲ್, ಪಡಿತರ ಚೀಟಿಯನ್ನು ಸಾರ್ವಜನಿಕರ ಆರ್ಥಿಕ ಪರಿಸ್ಥಿತಿ ಆಧರಿಸಿ ನೀಡಿರುವಂತೆ ರಾಜ್ಯದಲ್ಲಿರುವ ವಿಶೇಷ ಚೇತನರಿಗೆ, ವಿಧವೆಯರಿಗೆ ಹಾಗೂ ಇತರರಿಗೆ ವಿಶೇಷ ಪಡಿತರ ಚೀಟಿ ವಿತರಿಸಿ ಸೌಲಭ್ಯ ನೀಡುವ ಯೋಜನೆಯ ಕುರಿತು ಸರ್ಕಾರದ ನಿಲುವೇನು? (ವಿವರ ನೀಡುವುದು)